





ದಿನಾಂಕ:10-12-2023 ರಂದು ಗಡಿನಾಡ ಸಾಹಿತ್ಯ ಸಾಂಸ್ಕೃತಿಕ ಅಕಾಡೆಮಿ ಯು.ಎ.ಇ ಘಟಕದ ವತಿಯಿಂದ ವುಡ್‌ಲೆಮ್ ಪಾರ್ಕ್ ಶಾಲಾ ಆವರಣದಲ್ಲಿ ಆಯೋಜಿಸಿದ್ದ ದುಬೈ ಗಡಿನಾಡ ಉತ್ಸವ ಹಾಗೂ ಗಡಿನಾಡು ರತ್ನ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಜಗತ್ತಿನಾದ್ಯಂತ ಕನ್ನಡಿಗರು ಆಯಾ ನಾಡಿನಲ್ಲಿ ಮನೆ ಮಾತಾಗುವ ಮೂಲಕ ಕನ್ನಡದ ಸಿರಿಯನ್ನು ಹೆಚ್ಚಿಸಿದ್ದಾರೆ. ಅದೇ ರೀತಿ ದುಬೈನಲ್ಲಿಯೂ ಸಾಕಷ್ಟು ಕನ್ನಡಿಗರು ನೆಲೆಯೂರುವ ಮೂಲಕ ಕನ್ನಡದ ಕಂಪನ್ನು ಹರಡಿ ಕನ್ನಡಾಭಿಮಾನ ಮೆರೆದಿದ್ದಾರೆ ಎಂದು ಮಾನ್ಯ ಸಭಾಪತಿ ಶ್ರೀ ಬಸವರಾಜ ಎಸ್.ಹೊರಟ್ಟಿ ತಮ್ಮ ಮನದಾಳದ ಮಾತನ್ನು ಹೇಳಿದರು.